ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರವರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 21/02/2020

# ಮಾ.2ರಂದು ಸಿಎಂ ಉತ್ತರ; ಸ್ಪೀಕರ್

**ವಿಧಾನಸಭೆ:** ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಹೆಚ್ಚಿನ ಕಾಲಾವಕಾಶ ನೀಡಬೇಕು ಎಂಬ ಪ್ರತಿಪಕ್ಷಗಳ ಒತ್ತಡಕ್ಕೆ ಮಣಿದ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಸಿಎಂ ಯಡಿಯೂರಪ್ಪ ಮಾ.2ರಂದು ಉತ್ತರ ನೀಡಲಿದ್ದಾರೆ ಎಂದು ಪ್ರಕಟಿಸಿದ್ದಾರೆ. ಗದಿಯಂತೆ ಗುರುವಾರ ಮಧ್ಯಾಹ್ನ 4 ಗಂಟೆಗೆ ಮುಖ್ಯಮಂತ್ರಿಗಳು ಉತ್ತರ ನೀಡಬೇಕಿತ್ತು. ಆದರೆ, ಕಾಂಗ್ರೆಸ್ ಹಾಗೂ ಜೆಡಿಎಸ್ ಶಾಸಕರು ತಮಗೆ ಮಾತನಾಡಲು ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದ್ದರು. ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಕೂಡ, ರಾಜ್ಯಪಾಲರ ಭಾಷಣದಲ್ಲಿ ಅನೇಕ ವಿಷಯಗಳನ್ನು ಉಲ್ಲೇಖಿಸಲಾಗಿದ್ದು, ಆ ಕುರಿತು ವಿಸ್ತೃತ ಚರ್ಚೆ ನಡೆಯಬೇಕು. ಅದಕ್ಕಾಗಿ ಸದನವನ್ನು ವಿಸ್ತರಿಸಬೇಕು ಎಂದು ಮನವಿ ಮಾಡಿದ್ದರು. ಇದಕ್ಕೆ ಸ್ಪಂದಿಸಿದ ಸ್ಪೀಕರ್ ಈ ಕುರಿತು ಆಡಳಿತ ಪಕ್ಷದ ಸದಸ್ಯರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಆದರಂತೆ, ಗುರುವಾರ ಇಡೀ ದಿನ ಚರ್ಚೆಗೆ ಅವಕಾಶ ಕಲ್ಪಿಸಿ, ಮುಖ್ಯಮಂತ್ರಿಗಳು ಮಾರ್ಚ್ 2ರಂದು ಉತ್ತರ ನೀಡಲು ಅವಕಾಶ ಕಲ್ಪಿಸಿದ್ದಾರೆ. ಇದಕ್ಕಾಗಿ ಮಾರ್ಚ್ 2 ರಿಂದ 4ರವರೆಗೆ ನಿಗದಿಯಾಗಿದ್ದ ಸಂವಿಧಾನದ ಕುರಿತು ಚರ್ಚೆಯನ್ನು ಎರಡು ದಿನಕ್ಕೆ ಮೊಟಕುಗೊಳಿಸಲಾಗಿದೆ.

4